ಕರ್ನಾಟಕ ಸರ್ಕಾರ

**ಅರಣ್ಯ ಇಲಾಖೆ**

**ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಮುಖ್ಯಸ್ಥರು, ಅರಣ್ಯ ಪಡೆ) ಹಾಗೂ ಆಯ್ಕೆ ಪ್ರಾಧಿಕಾರ ಇವರ ಕಚೇರಿ, ಅರಣ್ಯ ಭವನ, ಮಲ್ಲೇಶ್ವರಂ, ಬೆಂಗಳೂರು-560003**

**240 ಅರಣ್ಯ ರಕ್ಷಕ ಮತ್ತು 329 ಉಪ ವಲಯ ಅರಣ್ಯಾಧಿಕಾರಿ ಹಾಗೂ ಮೋಜಣಿದಾರರ ಹುದ್ದೆಗಳಿಗೆ ನೇರ ನೇಮಕಾತಿ 2017-18**

**ಅಧಿಸೂಚನೆ ಸಂಖ್ಯೆ: ಬಿ9-ನೇಮಕಾತಿ-ವಿವ-1/2017-18 ದಿನಾಂಕ: 10-04-2017 ಹಾಗೂ ಅಧಿಸೂಚನೆ ಸಂಖ್ಯೆ: ಬಿ9-ನೇಮಕಾತಿ-ವಿವ-2/2017-18 ದಿನಾಂಕ: 10-04-2017**

**ಪ್ರಕಟಣೆ**

ಈ ಕಛೇರಿಯ ದಿನಾಂಕ: 07.06.2018 ರ ಪ್ರಕಟಣೆಯನ್ನು ಮುಂದುವರೆಸುತ್ತಾ, ಉಪ ವಲಯ ಅರಣ್ಯಾಧಿಕಾರಿ ಹಾಗೂ ಅರಣ್ಯ ರಕ್ಷಕ ಹುದ್ದೆಯ ದೈಹಿಕ ತಾಳ್ವಿಕೆ ಹಾಗೂ ದೈಹಿಕ ಕಾರ್ಯ ಸಮರ್ಥತೆ ಪರೀಕ್ಷೆಗೆ ಹಾಜರಾಗುವ 1:20 (ಹುದ್ದೆ:ಅಭ್ಯರ್ಥಿ) ಅಭ್ಯರ್ಥಿಗಳ ಗಮನಕ್ಕೆ ಈ ಕೆಳಕಂಡ ಮಾಹಿತಿಯನ್ನು ತರಲಾಗಿದೆ.

1. ಪುರುಷರು ತೋಳಿಲ್ಲದ ಬನಿಯನ್, ನಿಕ್ಕರ್ ಹಾಗೂ ಶೂಸ್ (shoe) ಗಳನ್ನು ಕಡ್ಡಾಯವಾಗಿ ಧರಿಸುವುದು.
2. ಮಹಿಳೆಯರಿಗೆ ಅವಶ್ಯಕತೆಗೆ ತಕ್ಕಂತಹ ಉಡುಪು ಹಾಗೂ ಶೂಸ್ (shoe) ಗಳನ್ನು ಕಡ್ಡಾಯವಾಗಿ ಧರಿಸುವುದು.
3. ದೈಹಿಕ ತಾಳ್ವಿಕೆ / ದೈಹಿಕ ಕಾರ್ಯ ಸಮರ್ಥತೆ ಪರೀಕ್ಷೆಯಲ್ಲಿ ಯಾವುದೇ ಅವಘಡ ಸಂಭವಿಸಿದಲ್ಲಿ ಇಲಾಖೆಯು ಹೊಣೆಗಾರರಾಗುವುದಿಲ್ಲ.
4. ಯಾವುದೇ ವಿಧದ ಅಂಗವಿಕಲತೆ ಇರುವ ಅಭ್ಯರ್ಥಿಗಳಿಗೆ ಪರೀಕ್ಷೆಗಳಲ್ಲಿ ಭಾಗವಹಿಸಲು ಅವಕಾಶವಿರುವುದಿಲ್ಲ. ಕುಷ್ಠರೋಗದಿಂದ ಗುಣಮುಖಹೊಂದಿದ ಅಭ್ಯರ್ಥಿಗೂ ಯಾವುದೇ ವಿಧದ ಅಂಗವಿಕಲತೆ ಇರಬಾರದು.
5. ಗರ್ಭಿಣಿ ಮಹಿಳೆಯರಾಗಿದ್ದಲ್ಲಿ ವೈದ್ಯಕೀಯ ದೃಢೀಕರಣ ಪತ್ರ ನೀಡಿದಲ್ಲಿ ಸದರಿ ಪರೀಕ್ಷೆಗಳಲ್ಲಿ ಭಾಗವಹಿಸುವ ಪ್ರಕ್ರಿಯೆಯಿಂದ ವಿನಾಯಿತಿ ನೀಡಲಾಗಿದೆ ಹಾಗೂ ಲಿಖಿತ ಪರೀಕ್ಷೆಗೆ ಹಾಜರಾಗಲು ಅವಕಾಶ ನೀಡಲಾಗುವುದು.
6. ಅಭ್ಯರ್ಥಿ ದೈಹಿಕ ತಾಳ್ವಿಕೆ / ದೈಹಿಕ ಕಾರ್ಯ ಸಮರ್ಥತೆ ಪರೀಕ್ಷೆಯಲ್ಲಿ ಭಾಗವಹಿಸುವಾಗ ಯಾವುದೇ ರೀತಿಯ ಎಲೆಕ್ಟ್ರಾನಿಕ್ ಸಲಕರಣೆ / ಮೊಬೈಲ್ ಫೋನ್ ಬಳಸುವುದನ್ನು ನಿಷೇಧಿಸಲಾಗಿದೆ.
7. ಅಭ್ಯರ್ಥಿ ಈ ಪರೀಕ್ಷೆಗಳಲ್ಲಿ ಭಾಗವಹಿಸುವಾಗ ಪ್ರಥಮ ಚಿಕಿತ್ಸೆಗೆ ಬೇಕಾಗುವ ಸಾಮಗ್ರಿಗಳನ್ನು ಹಾಗೂ ಕುಡಿಯುವ ನೀರು, ಇತ್ಯಾದಿ ಅತೀ ಅವಶ್ಯಕ ಸಾಮಗ್ರಿಗಳನ್ನು ತನ್ನೊಂದಿಗೆ ತೆಗೆದುಕೊಂಡು ಪರೀಕ್ಷೆಯಲ್ಲಿ ಭಾಗವಹಿಸಲು ಅವಕಾಶ ನೀಡಲಾಗಿದೆ.
8. ದೈಹಿಕ ತಾಳ್ವಿಕೆ (ಕಾಲ್ನಡಿಗೆ) / ದೈಹಿಕ ಕಾರ್ಯ ಸಮರ್ಥತೆ ಪರೀಕ್ಷೆಯಲ್ಲಿ ಭಾಗವಹಿಸುವ ಸಮಯದಲ್ಲಿ ಯಾವುದೇ ರೀತಿಯ ಅನಾರೋಗ್ಯಕೀಡಾದಲ್ಲಿ ಅಥವಾ ತುರ್ತು ಅವಘಡ ಸಂಭವಿಸಿದಲ್ಲಿ ಇಲಾಖಾ ಸಿಬ್ಬಂದಿಗಳಿಂದ ವೈದ್ಯಕೀಯ ಸಹಾಯವನ್ನು ತುರ್ತಾಗಿ ಕೋರಲು ಅಭ್ಯರ್ಥಿಗಳಿಗೆ ತಿಳಿಸಲಾಗಿದೆ.

ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ
(ಮುಖ್ಯಸ್ಥರು, ಅರಣ್ಯ ಪಡೆ)

ದಿನಾಂಕ: 29.05.2018
ಸ್ಥಳ: ಬೆಂಗಳೂರು